

ಅರುಣ ಪಿ. ಭಟ್ಟ

# ವಾರಭವಿಷ್ಯ 26.8.2021ರಿಂದ 1.9.2021ರವರೆಗೆ




ಉದ್ಯೋಗ ವಿಚಾರದಲ್ಲಿ ಅದ್ಭುತ ಯಶಸ್ಸಿನೊಂದಿಗೆ ವಾರದ ಆರಂಭ ಆಗುವ ಸಾಧ್ಯತೆ ಇದೆ. ಕಲೆ– ತಂತ್ರಜ್ಞಾನದಂತಹ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗ್ರಹಗತಿಗಳು ಅನುಕೂಲಕರವಾಗಿವೆ. ಹೊಸದಾಗಿ ಕೆಲಸಕ್ಕಾಗಿ ಇಂಟರ್‌ ವ್ಯೂಗಳಿಗೆ ತೆರಳಿದರೆ ಸಕಾರಾತ್ಮಕ ಫಲಿತಾಂಶ ದೊರೆಯುವ ಸಾಧ್ಯತೆ ಹೆಚ್ಚಿರುತ್ತದೆ. ಶುಭದಿನ: 28. ಉಮಾಮಹೇಶ್ವರ ಪ್ರಾರ್ಥನೆ ಮಾಡಿರಿ.




ವಾರದ ಆರಂಭದಲ್ಲಿ ಮನೆಯಲ್ಲಿ ಹಾಗೂ ಕುಟುಂಬದಲ್ಲಿ ಸಂತೋಷ ಇರುವುದರಿಂದ ನಿಮ್ಮ ಮನಸು ಕೂಡ ಸಮಾಧಾನವಾಗಿ ಇರುತ್ತದೆ. ಹಲವು ಕ್ಷೇತ್ರದಲ್ಲಿ ನೀವು ಈ ಹಿಂದೆ ಪಟ್ಟ ಶ್ರಮಕ್ಕೆ ಈಗ ಫಲಿತಾಂಶ ದೊರೆಯುತ್ತದೆ. ನಿಮ್ಮ ಜೀವನಮಟ್ಟ ಹೆಚ್ಚುತ್ತದೆ. ಉದ್ಯೋಗದಲ್ಲಿ ಯಶಸ್ಸು ನಿಮ್ಮ ಮನೆಯ ಬಾಗಿಲು ಬಡಿಯುತ್ತದೆ. ಶುಭದಿನ 26. ಹನುಮಾನ್ ಚಾಲಿಸ್ ಪಠಿಸಿರಿ.




ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಳ್ಳಿ. ಒಪ್ಪಂದ ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ: 29. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಈ ವಾರ ಸಕಾರಾತ್ಮಕ ಪ್ರಭಾವ ನಿಮ್ಮ ಮೇಲೆ ಬೀರಲಿರುವ ಕಾರಣಕ್ಕೆ ಸದ್ಯಕ್ಕೆ ನೀವು ಎದುರಿಸುತ್ತಿರುವ ಹಲವು ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ಕಾನೂನು ವ್ಯಾಜ್ಯಗಳು ಕುಟುಂಬದಲ್ಲಿ ಸಮತೋಲನ ಕಾಯ್ದುಕೊಳ್ಳಲು ಪ್ರಯತ್ನ ಮಾಡುತ್ತೀರಿ. ಆರ್ಥಿಕ ಸ್ಥಿತಿ ಸಾಧಾರಣ ಎಂಬುದಕ್ಕಿಂತ ಸ್ವಲ್ಪ ಉತ್ತಮವಾಗಿರುತ್ತದೆ. ಆದರೂ ಏರಿಳಿತಗಳು ಕಂಡುಬರುತ್ತವೆ. ಶುಭದಿನ: 30. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಆರೋಗ್ಯ ಸುಧಾರಣೆ ಸೇರಿದಂತೆ ಹಲವಾರು ಸಮಸ್ಯೆಗಳು ಬಗೆಹರಿಯುತ್ತವೆ. ಮನೆಯಲ್ಲಿ ಶುಭ ಕಾರ್ಯ ಆಯೋಜಿಸುವ ಸಾಧ್ಯತೆ ಇದೆ. ನಿಮಗೆ ವಹಿಸಿದ ಜವಾಬ್ದಾರಿಗಳನ್ನು ಅಚ್ಚುಕಟ್ಟಾಗಿ ಪೂರ್ಣಗೊಳಿಸುತ್ತೀರಿ. ಪ್ರೀತಿಪಾತ್ರರ ಜತೆಗೆ ತುಂಬ ಸಂತೋಷವಾದ ಸಮಯವನ್ನು ಕಳೆಯಲಿದ್ದೀರಿ. ಗೃಹಾಲಂಕಾರ ವಸ್ತುಗಳನ್ನು ಖರೀದಿ ಮಾಡುವ ಸಾಧ್ಯತೆ ಇದೆ. ಶುಭದಿನ: 1. ವಿಷ್ಣು ಸಹಸ್ರನಾಮ ಓದಿರಿ.




ವಾರದ ಶುರುವಿನಲ್ಲೇ ಉದ್ಯೋಗ ವಿಚಾರವಾಗಿ ಪ್ರಯಾಣ ಮಾಡಬೇಕಾಗಿ ಬರಬಹುದು. ಬೇರೆ ಊರು ರಾಜ್ಯ– ದೇಶದಲ್ಲಿ ಹೊಸ ಕೆಲಸ ಅಥವಾ ವರ್ಗಾವಣೆಯ ಸಾಧ್ಯತೆ ಇದೆ. ವ್ಯಾಪಾರ ವಿಸ್ತರಣೆಗೆ ಆಲೋಚನೆ ಮಾಡುತ್ತೀರಿ. ಆದರೆ ಅದರ ಸಲುವಾಗಿಯೂ ಪ್ರಯಾಣ ಮಾಡುವ ಅಗತ್ಯ ಕಂಡುಬರುತ್ತದೆ. ಹಣಕಾಸು ಹೂಡಿಕೆ ನಿಮಗೆ ಅನುಕೂಲ ಆಗಲಿದೆ. ಶುಭದಿನ: 29. ನವದುರ್ಗಾ ಆರಾಧನೆ ಮಾಡಿರಿ.




ಈ ವಾರ ಹಲವು ಕ್ಷೇತ್ರದಲ್ಲಿ ಸಕಾರಾತ್ಮಕವಾದ ಫಲಿತಾಂಶ ಪಡೆಯಲು ಸೂಕ್ತವಾಗಿದೆ. ರಚನಾತ್ಮಕ ಕಲೆ, ಸಾಹಿತ್ಯ, ಶಿಕ್ಷಣ, ಉಪನ್ಯಾಸ, ಸಂಶೋಧನೆ, ತಂತ್ರಜ್ಞಾನ ಕ್ಷೇತ್ರದಲ್ಲಿ ಆಸಕ್ತಿ ಇದ್ದರೆ ದೊಡ್ಡ ಮಟ್ಟದಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಹುಡುಕಿಕೊಂಡು ಬರಲಿದೆ. ವಾಣಿಜ್ಯ, ಸ್ಪರ್ಧಾತ್ಮಕ ಕ್ಷೇತ್ರದಲ್ಲೂ ಯಶಸ್ಸು ದೊರೆಯಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲಿದೆ. ಶುಭದಿನ: 27. ಆದಿತ್ಯ ಹೃದಯ ಪಠಿಸಿರಿ.




ವಾರದ ಮೊದಲ ಭಾಗದಲ್ಲಿ ವೈಯಕ್ತಿಕ ಕೆಲಸಗಳನ್ನು ಮುಗಿಸಿಕೊಳ್ಳಿ. ವ್ಯಾಪಾರಿಗಳು ಗುಣಮಟ್ಟದ ನಿರ್ಧಾರ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ. ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಹೊಸ ಕೆಲಸಕ್ಕೆ ಪ್ರಯತ್ನ ಮಾಡುತ್ತಿರುವವರು ಶ್ರಮವನ್ನು ಹೆಚ್ಚಿಸಬೇಕು. ಸೂಚಿಸುವ ಸಾಧ್ಯತೆ ಇದೆ. ಶುಭದಿನ: 28. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.




ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗ ಹಾಗೂ ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ತುಂಬ ಮುಖ್ಯವಾದ ಚರ್ಚೆ ಕೂಡ ನಡೆಸುವ ಸಾಧ್ಯತೆ ಇದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಹಾಗೂ ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಸೌಹಾರ್ದಯುತವಾದ ಬಾಂಧವ್ಯ ಇರುತ್ತದೆ. ಶುಭದಿನ: 29. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.




ವಾರದ ಶುರುವಿನಲ್ಲಿ ದೂರದ ಪ್ರದೇಶಗಳಿಗೆ ಪ್ರಯಾಣ ಮಾಡುವ ಸಾಧ್ಯತೆ ಇದೆ. ಕಾನೂನು ಕಟ್ಟಲೆ ವ್ಯವಹಾರಗಳು ಈ ಅವಧಿಯಲ್ಲಿ ನಿಮಗೆ ಅನುಕೂಲಕರವಾಗಿವೆ. ದೂರದ ಪ್ರದೇಶಗಳಲ್ಲಿ ವ್ಯಾಪಾರ ವ್ಯವಹಾರ ವಿಸ್ತರಣೆ ಮಾಡಬೇಕು ಅಂದುಕೊಳ್ಳುತ್ತಿರುವವರಿಗೆ ಹಲವು ಅವಕಾಶಗಳು ದೊರೆಯಲಿವೆ. ಆರೋಗ್ಯದಲ್ಲಿ ಕೆಲ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆಗಳಿವೆ. ಶುಭದಿನ: 1. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಿಂದಲೇ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಆ ಕಾರಣಕ್ಕೆ ನೀವೂ ಸಂತೋಷವಾಗಿರುತ್ತೀರಿ. ಸದ್ಯಕ್ಕೆ ನೀವು ಎದುರಿಸುತ್ತಿರುವ ಬಿಕ್ಕಟ್ಟುಗಳು ನಿವಾರಣೆ ಆಗುತ್ತವೆ. ನಿಮ್ಮ ಸಾಮರ್ಥ್ಯ ಹಾಗೂ ಒಟ್ಟಾರೆ ಆಲೋಚನೆಯಲ್ಲಿ ಸಕಾರಾತ್ಮಕವಾದ ಪ್ರಗತಿ ಕಾಣಿಸಿಕೊಳ್ಳುತ್ತದೆ. ದೈಹಿಕ ಸದೃಢತೆ ಬಗ್ಗೆ ಹೆಚ್ಚಿನ ಗಮನ ನೀಡುವ ಸಾಧ್ಯತೆ ಇದೆ. ಶುಭದಿನ: 28. ಶನಿಸ್ತೋತ್ರ ಪಠಿಸಿರಿ.




ಕುಟುಂಬದವರಿಂದ ಶುಭ ಸುದ್ದಿಯನ್ನು ಕೇಳುತ್ತೀರಿ. ಸಮಸ್ಯೆಗಳು ಶಮನವಾಗುತ್ತವೆ. ಕನಿಷ್ಠ ಪಕ್ಷ ಪರಿಸ್ಥಿತಿಯಲ್ಲಿ ಸುಧಾರಣೆ ಕಾಣಿಸುತ್ತದೆ. ಇದರ ಜತೆಗೆ ಮಾನಸಿಕ ದೃಢತೆ ಹೆಚ್ಚಲಿದೆ. ನಿಮ್ಮ ವಿರೋಧಿಗಳನ್ನು ಈ ಅವಧಿಯಲ್ಲಿ ಮಣಿಸುತ್ತೀರಿ. ಹಣಕಾಸು ಹೂಡಿಕೆ ಲಾಭದಾಯಕವಾಗಿ ಇರುತ್ತದೆ. ನಿಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಗಮನ ನೀಡಬೇಕಾಗುತ್ತದೆ. ಶುಭದಿನ: 26. ಗಣಪತಿಗೆ ದೂರ್ವಾರ್ಚನೆ ಮಾಡಿರಿ.